# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1298 |
| ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 22-08-2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಯೂರಿಯಾ ರಾಸಾಯನಿಕ ಕೊರತೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕೊರತೆಯಿಂದ ರೈತರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಸರ್ಕಾರದ ಅವಲೋಕನವೇನು; (ವಿವರ ಒದಗಿಸುವುದು) | ಪ್ರಸ್ತುತ ಸಾಲಿನ ಮುಂಗಾರು ಹಂಗಾಮಿನಲ್ಲಿ ಹಂಚಿಕೆಗನುಗುಣವಾಗಿ ಯೂರಿಯಾ ರಸಗೊಬ್ಬರವು ಕೇಂದ್ರ ಸರ್ಕಾರದಿಂದ ಸರಬರಾಜಾಗದ ಕಾರಣ ಕೆಲವು ಜಿಲ್ಲೆಗಳಲ್ಲಿ ಯೂರಿಯಾ ರಸಗೊಬ್ಬರಕ್ಕೆ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಯೂರಿಯಾ ಕೊರತೆಗೆ ಈ ಕೆಳಕಂಡ ಅಂಶಗಳು ಕಾರಣವಾಗಿರುತ್ತವೆ:<br>• ರಾಜ್ಯದಲ್ಲಿ ಮುಂಚಿತವಾಗಿ ಮುಂಗಾರು ಹಂಗಾಮು ಪ್ರಾರಂಭವಾಗಿ ಉತ್ತಮವಾಗಿ ಮಳೆಯಾಗಿದ್ದರಿಂದ ಸಾಮಾನ್ಯ ಅವಧಿಗಿಂತ ಮುಂಚೆ ಬಿತ್ತನೆಯಾಗಿರುತ್ತದೆ.<br>• ಹೆಚ್ಚು ರಸಗೊಬ್ಬರ ಅವಶ್ಯವಿರುವ ಮುಸುಕಿನ ಜೋಳದ ವಿಸ್ತೀರ್ಣವು ಗಣನೀಯವಾಗಿ ಹೆಚ್ಚಳವಾಗಿರುತ್ತದೆ (ಅಂದಾಜು 2.00 ಲಕ್ಷ ಹೆಕ್ಟೇರ್).<br>• ಅಂದಾಜು 13,000 ಹೆಕ್ಟೇರ್ ಪ್ರದೇಶದಲ್ಲಿ ಮರುಬಿತ್ತನೆ ಕೈಗೊಳ್ಳಲಾಗಿರುತ್ತದೆ.<br>• ಪ್ರಮುಖ ಜಲಾಶಯಗಳಿಂದ (ತುಂಗಭದ್ರಾ, ಕೃಷ್ಣಾ, ಕಾವೇರಿ ಇತ್ಯಾದಿ) ಅವಧಿಗಿಂತ ಮುಂಚಿತವಾಗಿ ಅಚ್ಚುಕಟ್ಟು ಪ್ರದೇಶಗಳಿಗೆ ನೀರನ್ನು ಬಿಟ್ಟಿರುವುದರಿಂದ ಮುಂಚಿತವಾಗಿ ನಾಟಿ ಕೈಗೊಳ್ಳಲಾಗಿರುತ್ತದೆ.<br><br>ಯೂರಿಯಾ ಸರಬರಾಜಿಗೆ ಕ್ರಮ ಕೈಗೊಳ್ಳಲಾಗುತ್ತಿದ್ದು, ಮೇಲು ಗೊಬ್ಬರವಾಗಿ ಯೂರಿಯಾಗೆ ಪರ್ಯಾಯವಾಗಿ ನ್ಯಾನೋ ಯೂರಿಯಾವನ್ನು ಬಳಕೆ ಮಾಡಲು ರೈತರಲ್ಲಿ ಅರಿವು ಮೂಡಿಸಲಾಗುತ್ತಿದೆ. |

| | | |
|---|---|---|
| (ಆ) | ಚಾಲನೆಯಲ್ಲಿರುವ ಖರೀದಿ ಕೇಂದ್ರಗಳಲ್ಲಿ ಯೂರಿಯಾ ಪೂರೈಕೆ ಯಾವೆಲ್ಲಾ ಜಿಲ್ಲೆಗಳಲ್ಲಿ ಸರಿಯಾಗಿ ಆಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪೂರೈಕೆಯಲ್ಲಿ ವಿಳಂಬ ಮತ್ತು ಅಕ್ರಮ ಮಾರಾಟವನ್ನು ತಡೆಯಲು ತೆಗೆದುಕೊಂಡ ಕ್ರಮಗಳು ಯಾವುವು; (ವಿವರ ಒದಗಿಸುವುದು) | ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಈಗಾಗಲೇ ಬಿತ್ತನೆಯಾಗಿ 25 ರಿಂದ 40 ದಿನಗಳ ಬೆಳೆಗಳಿಗೆ ಮೇಲುಗೊಬ್ಬರವಾಗಿ ಯೂರಿಯಾ ನೀಡುತ್ತಿರುವ ಜಿಲ್ಲೆಗಳಾದ ಕೊಪ್ಪಳ, ದಾವಣಗೆರೆ, ಹಾವೇರಿ, ಗದಗ, ರಾಯಚೂರು, ಯಾದಗಿರಿ, ಧಾರವಾಡ, ಕಲಬುರಗಿ, ಬಳ್ಳಾರಿ, ಚಿತ್ರದುರ್ಗ ಮತ್ತು ವಿಜಯನಗರಗಳಲ್ಲಿ ಯೂರಿಯಾ ಕೊರತೆ ಉಂಟಾಗಿರುತ್ತದೆ.<br>ಪೂರೈಕೆಯಲ್ಲಿನ ವಿಳಂಬಕ್ಕೆ ಸರ್ಕಾರದಿಂದ ಈ ಕೆಳಗಿನಂತೆ ಕ್ರಮವಹಿಸಲಾಗುತ್ತಿದೆ.<br>• ಸನ್ಮಾನ್ಯ ಮುಖ್ಯಮಂತ್ರಿಯವರು ಮತ್ತು ಮಾನ್ಯ ಕೃಷಿ ಸಚಿವರಿಂದ ರಾಜ್ಯದ ಯೂರಿಯಾ ರಸಗೊಬ್ಬರದ ಬೇಡಿಕೆಗನುಗುಣವಾಗಿ ಪೂರೈಕೆ ಮಾಡಲು ಕೋರಿ ಕೇಂದ್ರ ಸರ್ಕಾರದ ರಸಗೊಬ್ಬರ ಸಚಿವರಿಗೆ ಮನವಿಯನ್ನು ಸಲ್ಲಿಸಲಾಗಿದೆ.<br>• ಕೇಂದ್ರದ ಮಾನ್ಯ ಕೃಷಿ ಮತ್ತು ರೈತರ ಕಲ್ಯಾಣ ಸಚಿವರು ದಿನಾಂಕ 14.08.2025ರಂದು ನಡೆಸಿದ ವಿಡಿಯೋ ಸಂವಾದದಲ್ಲಿಯೂ ಕೂಡ ಮಾನ್ಯ ಕೃಷಿ ಸಚಿವರು ರಾಜ್ಯಕ್ಕೆ ಇನ್ನೂ 2.67 ಲಕ್ಷ ಮೆ.ಟನ್ ಯೂರಿಯಾ ಕೊರತೆ ಇದ್ದು, ಆದಷ್ಟು ಬೇಗ ಪೂರೈಸುವಂತೆ ಕೋರಿದ್ದಾರೆ.<br>• ಬೇಡಿಕೆಗನುಗುಣವಾಗಿ ರಾಜ್ಯಕ್ಕೆ ಯೂರಿಯಾ ರಸಗೊಬ್ಬರವನ್ನು ಸರಬರಾಜು ಮಾಡಲು ಇಲಾಖೆಯಿಂದ ಪತ್ರಗಳ ಮುಖೇನ ಕೇಂದ್ರ ಸರ್ಕಾರಕ್ಕೆ ಕೋರಲಾಗಿದೆ.<br>• ರಾಜ್ಯಾದ್ಯಂತ ದೂರದರ್ಶನ, ಕರಪತ್ರಗಳು, ದಿನಪತ್ರಿಕೆಯಲ್ಲಿ ಲೇಖನಗಳ ಮುಖಾಂತರ ಯೂರಿಯಾ ರಸಗೊಬ್ಬರದ ವಿವೇಚನಾತ್ಮಕ ಬಳಕೆ ಮತ್ತು ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ನ್ಯಾನೋ ಯೂರಿಯಾವನ್ನು ಮೇಲುಗೊಬ್ಬರವಾಗಿ ಬಳಕೆ ಮಾಡುವುದರ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>• NFSNM (ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕಾಂಶ ಅಭಿಯಾನ) ಯೋಜನೆಯಡಿ ನ್ಯಾನೋ ಯೂರಿಯಾದ ಬಳಕೆಯನ್ನು ಉತ್ತೇಜಿಸಲಾಗುತ್ತಿದೆ.<br>• ಕೇಂದ್ರ ಸರ್ಕಾರದ ರಸಗೊಬ್ಬರ ಇಲಾಖೆಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ರಾಜ್ಯದ ಬೇಡಿಕೆಗನುಗುಣವಾಗಿ ಯೂರಿಯಾ ರಸಗೊಬ್ಬರದ ಪೂರೈಕೆಗೆ ಕ್ರಮವಹಿಸಲಾಗುತ್ತಿದೆ.<br>• ಪ್ರತಿದಿನ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಗೂಗಲ್ ಮೀಟ್ ಮೂಲಕ ರಸಗೊಬ್ಬರದ ಲಭ್ಯತೆ ಮತ್ತು ಬೇಡಿಕೆಯ ಬಗ್ಗೆ ಮಾಹಿತಿಯನ್ನು ಪಡೆದು, |

| | | |
|---|---|---|
| | | ಬೇಡಿಕೆಗನುಗುಣವಾಗಿ ಪೂರೈಕೆಗೆ ಕ್ರಮವಹಿಸಲಾಗುತ್ತಿದೆ.<br>• ತೀವ್ರ ಯೂರಿಯಾ ಬೇಡಿಕೆಯಿರುವ ಜಿಲ್ಲೆಗಳಿಗೆ ಬೇರೆ ಜಿಲ್ಲೆಗಳಲ್ಲಿರುವ ಕಾಪು ದಾಸ್ತಾನಿನಿಂದ ಸಹಕಾರ ಸಂಘಗಳ ಮೂಲಕ ರೈತರಿಗೆ ವಿತರಿಸಲು ಕ್ರಮವಹಿಸಲಾಗುತ್ತಿದೆ.<br><br>ಅಕ್ರಮ ಮಾರಾಟವನ್ನು ತಡೆಯಲು ತೆಗೆದುಕೊಂಡ ಕ್ರಮಗಳು ಕೆಳಗಿನಂತಿವೆ:<br>ರಸಗೊಬ್ಬರವನ್ನು ಕಾಳಸಂತೆಯಲ್ಲಿ/ ಅಕ್ರಮವಾಗಿ ಮಾರಾಟವಾಗುವುದನ್ನು /ಇತರೆ ಉಲ್ಲಂಘನೆಗಳನ್ನು ತಡೆಯಲು ರಸಗೊಬ್ಬರ (ನಿಯಂತ್ರಣ) ಆದೇಶ, 1985ರಡಿ ರಸಗೊಬ್ಬರ ಪರಿವೀಕ್ಷಕರನ್ನು ಅಧಿಸೂಚಿಸಲಾಗಿರುತ್ತದೆ. ಅಲ್ಲದೇ, ರಾಜ್ಯದಲ್ಲಿ ಅಪರ ಕೃಷಿ ನಿರ್ದೇಶಕರ ನೇತೃತ್ವದಲ್ಲಿ ಜಾಗೃತಕೋಶ ಸೃಜಿಸಲಾಗಿದೆ ಮತ್ತು ಇವರ ಅಧೀನದಲ್ಲಿ ರಾಜ್ಯದ 4 ಕಂದಾಯ ವಿಭಾಗಗಳಲ್ಲಿ (ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ) ಜಂಟಿ ಕೃಷಿ ನಿರ್ದೇಶಕರು(ಜಾಗೃತ ಕೋಶ)ಕಾರ್ಯ ನಿರ್ವಹಿಸುತ್ತಿದ್ದಾರೆ. ಜಾಗೃತಕೋಶದ ಅಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ) ಮತ್ತು ಅಧಿಸೂಚಿಸಿರುವ ರಸಗೊಬ್ಬರ ಪರಿವೀಕ್ಷಕರು ದೂರುಗಳನ್ನು ಆಧರಿಸಿ/ ಅನಿರೀಕ್ಷಿತವಾಗಿ/ಆಗಿಂದಾಗ್ಗೆ ಅವರ ವ್ಯಾಪ್ತಿಯಲ್ಲಿ ಯೂರಿಯಾ ಅಥವಾ ಇತರೆ ರಸಗೊಬ್ಬರಗಳನ್ನು ಅಕ್ರಮವಾಗಿ ದಾಸ್ತಾನು / ಸಾಗಾಣಿಕೆ ಮಾಡಿ ಕೃತಕ ಅಭಾವ ಸೃಷ್ಟಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. |
| (ಇ) | ಯೂರಿಯಾ ಕೊರತೆಯಿಂದಾಗಿ ರೈತರು ಕಪ್ಪು ಬಜಾರಿನಲ್ಲಿ ದುಬಾರಿ ಬೆಲೆಯಲ್ಲಿ ರಸಗೊಬ್ಬರ ಖರೀದಿಸುತ್ತಿದ್ದಾರೆ ಎಂಬ ದೂರಿನಂತೆ ಸರ್ಕಾರದ ಪ್ರತಿಕ್ರಿಯೆ ಏನು; ಹೀಗೆ ದುರುಪಯೋಗ ಮಾಡುತ್ತಿರುವ ಸರಬರಾಜುದಾರರ ವಿರುದ್ಧ ಏನಾದರೂ ಕಠಿಣ ಕ್ರಮ ತೆಗೆದುಕೊಳ್ಳಲಾಗಿದೆಯೇ; ಕೈಗೊಂಡಿದ್ದಲ್ಲಿ, ವಿವರ ಒದಗಿಸುವುದು; | ಸನ್ಮಾನ್ಯ ಮುಖ್ಯಮಂತ್ರಿಯವರ ನಿರ್ದೇಶನದಂತೆ, ಕೃಷಿ, ಕಂದಾಯ ಮತ್ತು ಪೋಲೀಸ್ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಯೂರಿಯಾ ರಸಗೊಬ್ಬರದ ಅನಧಿಕೃತ ಶೇಖರಣೆ/ಸಂಗ್ರಹಣೆ/ದುಬಾರಿ ಬೆಲೆಯಲ್ಲಿ ಮಾರಾಟದ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಪ್ರಸಕ್ತ ಸಾಲಿನಲ್ಲಿ (ಜುಲೈ ಮಾಹೆಯ ಅಂತ್ಯಕ್ಕೆ) ರಾಜ್ಯದಲ್ಲಿ ಯೂರಿಯಾ ರಸಗೊಬ್ಬರವನ್ನು ನಿಗಧಿತ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವ 17 ಪ್ರಕರಣಗಳು ಕಂಡುಬಂದಿದ್ದು, 16 ಮಾರಾಟಗಾರರ ಪರವಾನಗಿಯನ್ನು ಅಮಾನತ್ತು ಮಾಡಿರುತ್ತಾರೆ. |

| | | |
|---|---|---|
| | | ವಿವರ ಕೆಳಕಂಡಂತಿದೆ:<br>1. ಬೆಂಗಳೂರು ದಕ್ಷಿಣ-1<br>2. ದಾವಣಗೆರೆ-1<br>3. ಗದಗ-2<br>4. ಕಲಬುರಗಿ-5<br>5. ಕೊಪ್ಪಳ-2<br>6. ರಾಯಚೂರು-2<br>7. ವಿಜಯನಗರ-2<br>8. ಯಾದಗಿರಿ-1<br>ರಾಯಚೂರು ಜಿಲ್ಲೆಯಲ್ಲಿ ಒಂದು ಚಿಲ್ಲರೆ ರಸಗೊಬ್ಬರ ಮಾರಾಟ ಪರವಾನಗಿಯನ್ನು ರದ್ದು ಪಡಿಸಲಾಗಿರುತ್ತದೆ. |
| (ಈ) | ರಾಜ್ಯದಲ್ಲಿನ ತಾಲ್ಲೂಕು ಮಟ್ಟದ ಕೃಷಿ ಇಲಾಖೆ ಕಚೇರಿಗಳಿಗೆ ರೈತರಿಗೆ ತ್ವರಿತವಾಗಿ ಯೂರಿಯಾ ಲಭ್ಯವಾಗುವಂತೆ ಮಾಡಲು ಸರ್ಕಾರ ಹೊಸ ಕಾರ್ಯ ಯೋಜನೆ ರೂಪಿಸಿದೆಯೇ? (ವಿವರ ಒದಗಿಸುವುದು) | ರಾಜ್ಯದಲ್ಲಿನ ತಾಲ್ಲೂಕು ಮಟ್ಟದ ಕೃಷಿ ಇಲಾಖೆ ಕಚೇರಿಗಳಿಗೆ ರೈತರಿಗೆ ತ್ವರಿತವಾಗಿ ಯೂರಿಯಾ ಲಭ್ಯವಾಗುವಂತೆ ಮಾಡಲು ಸರ್ಕಾರ ಹೊಸ ಕಾರ್ಯ ಯೋಜನೆಯನ್ನು ರೂಪಿಸಿರುವುದಿಲ್ಲ.<br>ಮುಂದುವರೆದು, ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಮಾಹೆವಾರು /ರಸಗೊಬ್ಬರ ತಯಾರಕ ಸಂಸ್ಥೆವಾರು ಹಂಚಿಕೆಯಾಗುವ ರಸಗೊಬ್ಬರವನ್ನು ರಸಗೊಬ್ಬರ ತಯಾರಿಕಾ ಸಂಸ್ಥೆಯವರಿಂದ ನೇರವಾಗಿ ರಸಗೊಬ್ಬರ ಮಾರಾಟ ಪರವಾನಗಿ ಹೊಂದಿರುವ ಸಹಕಾರ ಸಂಘಗಳು ಹಾಗೂ ಖಾಸಗಿ ಮಾರಾಟಗಾರರಿಗೆ ಸರಬರಾಜು ಮಾಡಲಾಗುತ್ತದೆ.<br>ತದನಂತರ ಚಿಲ್ಲರೆ ರಸಗೊಬ್ಬರ ಮಾರಾಟಗಾರರಿಂದ ಆಧಾರ್ ಕಾರ್ಡ್ ಸಂಖ್ಯೆ ಆಧರಿಸಿ ಪಾಯಿಂಟ್ ಆಫ್ ಸೇಲ್ ಉಪಕರಣದ ಮೂಲಕ ರಸಗೊಬ್ಬರವನ್ನು ರೈತರಿಗೆ ವಿತರಣೆ ಮಾಡಲಾಗುತ್ತಿದೆ.<br>ರಸಗೊಬ್ಬರ ಮಾರಾಟದ ಉಸ್ತುವಾರಿಯನ್ನು ಇಲಾಖಾವತಿಯಿಂದ ನಿರ್ವಹಿಸಲಾಗುತ್ತಿದೆ. |

ಸಂಖ್ಯೆ: AGRI/268/ACT/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು